Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/20/2020-21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪವಿಭಾಗ, ಪೂರ್ವ ವಲಯ
ವಿ. ನಾಗೇನಹಳ್ಳಿ, ವಾರ್ಡ್ ನಂ: 22
ಬೆಂಗಳೂರು 560032.
ದಿನಾಂಕ: 26/02/2021

## ದಿನಾಂಕ: 26-02-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

ಸಭೆಗೆ ಹಾಜರಿದ್ದವರು:

- ಶ್ರೀ. ರಾಮಕೃಷ್ಣರೆಡ್ಡಿ, ಕಾರ್ಯಪಾಲಕ ಅಭಿಯಂತರರು, ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ರಾಜಶೇಖರ .ಎನ್ ಮಾಜಿ ಪಾಲಿಕೆ ಸದಸ್ಯರು, ವಿ. ನಾಗೇನಹಳ್ಳಿ.
- ಶ್ರೀ. ಶಿವನಾಯಕ್, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ವಿನೋದ್, ಕಂದಾಯ ವಸೂಲಿಗಾರರು
- ಶ್ರೀ. ಮುನಿರಾಮಣ್ಣ, ಸದಸ್ಯರು
- ಶ್ರೀ. ಲಾಜರ್, ಬಿ.ಡಬ್ಲ್ಯು.ಎಸ್.ಎಸ್.ಬಿ ಪರೀವೀಕ್ಷಕರು
- ಶ್ರೀ. ಅಂಜದ್ ಅಹ್ಮದ್, ಕೆ.ಆರ್.ಡ್ಲ್ಯೂ.ಎ ಸದಸ್ಯರು
- ಶ್ರೀ. ಚಂದ್ ಪಾಷ, ಕೆ.ಆರ್.ಡ್ಲ್ಯೂ.ಎ ಸದಸ್ಯರು
- ಶ್ರೀ. ಶೆಕ್ ರುಮಾನ್, ವಾರ್ಡ್ ಮಾರ್ಷಲ್ , ವಿ. ನಾಗೇನಹಳ್ಳಿ
- ಶ್ರೀ. ಬೆನ್ನಿಸಬಾಸ್ಟಿನ್, ನಾಗರೀಕರು
- ಶ್ರೀ. ಜೆಸೆನ್ತ ಡೇವಿಡ್, ನಾಗರೀಕರು 4ನೇ ಕ್ರಾಸ್ ಸನ್ ರೈಸ್ ಕಾಲೋನಿ
- ಶ್ರೀ. ಎ.ಕೆ ಪ್ರೇಮ ಕುಮಾರ್, ನಾಗರೀಕರು 4ನೇ ಕ್ರಾಸ್ ಸನ್ ರೈಸ್ ಕಾಲೋನಿ
- ಶ್ರೀಮತಿ. ಪದ್ಮಿನಿ, ನಾಗರೀಕರು
- ಶ್ರೀ. ರವಿ, ನಾಗರೀಕರು, ಸನ್ ರೈಸ್ ಕಾಲೋನಿ

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ರವರು ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ: 22ರ ನಾಗರೀಕರು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ರಾಮಕೃಷ್ಣರೆಡ್ಡಿ, ನೋಡಲ್ ಅಧಿಕಾರಿಗಳು ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು. ಹಾಗೂ ಕಮಿಟಿ ಕಾರ್ಯದರ್ಶಿಗಳು ಮಾತನಾಡುತ್ತಾ ದಿನಾಂಕ: 06/02/2021 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ. ಬೆನ್ನಿಸಬಾಸ್ಟಿನ್, ನಾಗರೀಕರು ಮಾತನಾಡುತ್ತಾ, ಸಿ.ಐ.ಎಲ್ ಲೇಔಟ್‌ನ ರಸ್ತೆಗಳಲ್ಲಿರುವ ಎಲೆಕ್ಟ್ರಿಕ್‌ಪೋಲ್‌ಗಳನ್ನು ಬೇರೆಕಡೆ ಸ್ಥಳಾಂತರಿಸುವಂತೆ ದೂರನ್ನು ನೀಡಿದ್ದರಿಂದ, ಈಗಾಗಲೇ ಬೆಸ್ಕಾಂ ಅಧಿಕಾರಿಗಳಿಗೆ ನೋಟೀಸ್ ಅನ್ನು ಹೊರಡಿಸಲಾಗಿರುತ್ತದೆ. ಹಾಗೂ ಬೆಸ್ಕಾಂ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳದೇ ಇರುವ ಕಾರಣ ಕೂಡಲೇ ನೋಡೆಲ್ ಅಧಿಕಾರಿಗಳ ಆದೇಶದಂತೆ ಸೂಕ್ತ ಕ್ರಮ ಕೈಗೊಳ್ಳಲು ಮತ್ತೊಮ್ಮೆ ನೋಟೀಸ್ ನೀಡುವುದಾಗಿ ತಿಳಿಸಿದರು.
- ಶ್ರೀ ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ರವರು ಮಾತನಾಡುತ್ತಾ ಕನಕನಗರದ 17ನೇ ಕ್ರಾಸ್, 18ನೇ ಕ್ರಾಸ್ ಹಾಗೂ 21ನೇ ಕ್ರಾಸ್‌ನ ವರೆಗೆ ರಸ್ತೆ ಕಾಮಗಾರಿಯನ್ನು ಪ್ರಗತಿಯಲ್ಲಿರುವ ಬಗ್ಗೆ ನೋಡೆಲ್ ಅಧಿಕಾರಿಗಳಿಗೆ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ರವರು ಮಾತನಾಡುತ್ತಾ, ವಾರ್ಡ್ ನಲ್ಲಿ ಕೋವಿಡ್-19 ಪರೀಕ್ಷೆಗಳು ನಡೆಯುತ್ತಿದ್ದು, ಹಾಗೂ ಈಗಾಗಲೇ 800 ರಿಂದ 850 ಹೆಲ್ತ್ ವ್ಯಾಕ್ಸಿನೇಷನ್ ಕೊಡಲಾಗಿದೆ ಎಂದು ಸಭೆಗೆ ಹಾಜರಾಗಿದ್ದ ಸದಸ್ಯರಿಗೆ ಹೇಳಿದರು. ಹಾಗೂ ೪೫ ವಯಸ್ಸಿನವರಿಂದ ೬೦ ವಯಸ್ಸಿನವರ ವರೆಗೆ ಹೆಲ್ತ್ ವ್ಯಾಕ್ಸಿನೇಷನ್ನು ನೀಡುವುದಾಗಿ ಮಾಹಿತಿ ಲಭ್ಯವಾಗಿದ್ದು, ಮುಂದಿನ ದಿನಗಳಲ್ಲಿ ಕಾರ್ಯ ರೂಪಕ್ಕೆ ತರುವ ಮುಂದಿನ ಸಭೆಯಲ್ಲಿ ಚರ್ಚಿಸು ಬಗ್ಗೆ ತಿಳಿಸಿದರು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಖಾತಾ ವರ್ಗಾವಣೆ, ಖಾತಾ ನೋಂದಣಿ, ತೆರಿಗೆ ಹಣ ಪಾವತಿ, ಹೊಸದಾಗಿ ಚುನಾವಣೆ ಗುರುತಿನ ಚೀಟಿ ಮಾಡುವ ಬಗ್ಗೆ ಹಾಗೂ ಇನ್ನಿತರ ಕಂದಾಯ ಪಾವತಿಗಳ ಬಗ್ಗೆ ಸಭೆಗೆ ಹಾಜರಿದ್ದ ಕಂದಾಯ ಇಲಾಖೆಯರೊಂದಿಗೆ ಹೆಚ್ಚಿನ ಕಾರ್ಯವಿಧಾನಗಳ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀ. ಕಾರ್ತಿಕ್, ವಸತಿ ಸೇವಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಕನಕನಗರದ 8ನೇ ಕ್ರಾಸ್ ರಸ್ತೆಗಳಲ್ಲಿ ಒಣ ಮರಗಳಿರುವುದರಿಂದ ಈಗಾಗಲೇ ಅರಣ್ಯ ಇಲಾಖೆಯವರಿಗೆ ನೋಟೀಸ್ ಅನ್ನು ನೀಡಿದ್ದು, ಅತಿ ಶೀಘ್ರದಲ್ಲಿ ಒಣಮರಗಳನ್ನು ತೆರವುಗೊಳಿಸುವುದಾಗಿ ನೋಡೆಲ್ ಅಧಿಕಾರಿಗಳು ತಿಳಿಸಿದರು. ಹಾಗೂ ಯಾವುದೇ ಕ್ರಮ ಕೈಗೊಳ್ಳದೇ ಇರುವ ಕಾರಣ ಮತ್ತೊಮ್ಮೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಟೀಸ್ ನೀಡಿರುವುದಾಗಿ ತಿಳಿಸಿದರು.
- ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಹೇಮಾಲತ ಎಂಬುವವರು 2018-19ನೇ ಸಾಲಿನಲ್ಲಿ ವಿದ್ಯಾರ್ಥಿ ಶುಲ್ಕ ಮರುಪಾವತಿಗೆ ಅರ್ಜಿಯನ್ನು ಸಲ್ಲಿಸಿರುತ್ತಾರೆ ಕಾರಣಾಂತರದಿಂದ ಕಲ್ಯಾಣ ಇಲಾಖೆಗೆ ತಡವಾಗಿ ಅರ್ಜಿಗಳು ಹೋಗಿರುತ್ತದೆ. ಹಾಗೂ ಕಳೆದ

ಹಿಂದಿನ ಸಭೆಯಲ್ಲಿ ಕಾರ್ಯವಿಧಾನಗಳ ಬಗ್ಗೆ ಚರ್ಚಿಸಲಾಗಿದ್ದು, ಅದಕ್ಕೆ ಸಂಬಂಧಪಟ್ಟ ಕಡತವನ್ನು ಹೇಮಲತ ರವರಿಗೆ ಹಿಂತಿರುಗಿಸಿರುವುದಾಗಿ ತಿಳಿಸಿದರು. ಮುಂದುವರೆದು 2019-20ನೇ ಸಾಲಿನಲ್ಲಿ ವಿದ್ಯಾರ್ಥಿ ಮರು ಶುಲ್ಕ ಪಾವತಿಗೆ ಮರು ಹೊಸ ಅರ್ಜಿಗಳನ್ನು ವಾರ್ಡ್ ಕಮಿಟಿಯ ಮೂಲಕ ಸಲ್ಲಿಸಿರುತ್ತಾರೆ. ಹಾಗೂ ಕಡತವನ್ನು ಮರು ಸಿದ್ಧಪಡಿಸಿ ಮೇಲಾಧಿಕರಿಗಳಿಗೆ ಕಳಿಸುವುದಾಗಿ ನೋಡೆಲ್ ಅಧಿಕಾರಿಗಳು ತಿಳಿಸಿದರು.

- ಶ್ರೀ. ರವಿ, ನಾಗರೀಕರು ಮಾತನಾಡುತ್ತಾ, ಸನ್ ರೈಸ್ ಕಾಲೋನಿ ರಸ್ತೆಯಲ್ಲಿವ ಆರ್.ಸಿ.ಸಿ ಪೈಪ್ ಗಳು ಮತ್ತು ಜಮಾವಣೆಯಾಗಿರುವ, ಮಣ್ಣಿನ ಗುಡ್ಡೆಗಳನ್ನು ಬೇರೆ ಕಡೆಗೆ ಸ್ಥಳಾಂತರಿಸುವಂತೆ ಹೇಳಿದರು. ಅದಕ್ಕೆ ಪ್ರತಿಯಾಗಿ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಕಾಮಗಾರಿಯ ಕೆಲಸ ಬಾಕಿ ಇರುವ ಕಾರಣ ಆರ್.ಸಿ.ಸಿ ಪೈಪ್ ಗಳನ್ನು ರಸ್ತೆಯ ಪಕ್ಕದಲ್ಲಿಯೇ ಸ್ಥಳಾಂತರಿಸಲಾಗಿದ್ದು, ಹಾಗೂ ಈಗಾಗಲೇ ಮಣ್ಣಿನ ಗುಡ್ಡೆಗಳನ್ನು ಸ್ವಚ್ಛಗೊಳಿಸಲಾಗಿದೆ ಎಂದು ತಿಳಿಸಿದರು.

- ಹಾಗೂ ಸಿ.ಐ.ಎಲ್ ಲೇಔಟ್ ನಲ್ಲಿ **Eletrical pole** ಅನ್ನು ಸ್ಥಳಾಂತರಿಸುವ ಬಗ್ಗೆ ಸಿ4 ನ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ಪತ್ರವನ್ನು ಬರೆದಿರುವುದಾಗಿ ತಿಳಿಸಿದರು.

- ಶ್ರೀ. ಕಮಲ್, ನಾಗರೀಕರು ಮಾತನಾಡುತ್ತಾ, ಕನಕನಗರದ 2ನೇ 'ಎ' ಕ್ರಾಸ್ ರಸ್ತೆಯಲ್ಲಿ **street light** ಹಾಳಾಗಿದ್ದು, ಅದಕ್ಕೆ ಸಂಬಂಧಪಟ್ಟ ಈಗಾಗಲೇ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ **street light** ಗಳನ್ನು ಸರಿಪಡಿಸುವಂತೆ ತಿಳಿಸಿದರು.

- ಕನಕನಗರದ 8ನೇ ಕ್ರಾಸ್ ರಸ್ತೆಯಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ಪ್ರಾರಂಭಿಸಲು ತಿಳಿಸಲಾಗಿತ್ತು. ಆದರೆ ಕೋರ್ಟ್ ನಲ್ಲಿ ಕೇಸ್ ಇರುವುದರಿಂದ ಮೊದಲು ಸ್ಥಳವನ್ನು ಪರೀಶೀಲಿಸಿ ತದನಂತರ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ತಿಳಿಸಿದರು.

- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಸನ್ ರೈಸ್ ಕಾಲೋನಿಯಲ್ಲಿ ಉಳಿದ ಎಲ್ಲಾ ಕಾಮಗಾರಿಯನ್ನು ಶ್ರೀಘ್ರವಾಗಿ ಮುಗಿಸುವಂತೆ ಸಭೆಗೆ ಹಾಜರಿದ್ದ ಪ್ರಸನ್ನ ಕುಮಾರ್ (ಗುತ್ತಿಗೆ ದಾರರು) ರವರಿಗೆ ತಿಳಿಸಿದರು.

- ಶ್ರೀ. ಚಂದ್ ಪಾಷ, ಕೆ.ಆರ್.ಡಬ್ಲ್ಯೂ.ಎ ಸದಸ್ಯರು, ಕನಕನಗರದ ೧೭ನೇ ಕ್ರಾಸ್ ರಸ್ತೆಯಲ್ಲಿ **street light** ಹಾಳಾಗಿದ್ದು, ಅದಕ್ಕೆ ಸಂಬಂಧಪಟ್ಟ ಈಗಾಗಲೇ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ **street light** ಗಳನ್ನು ಸರಿಪಡಿಸುವಂತೆ ತಿಳಿಸಿದರು.

- ಶ್ರೀಮತಿ ಪದ್ಮಿನಿ, ನಾಗರೀಕರು ಮಾತನಾಡುತ್ತಾ, ಕನಕನಗರದ ೬ನೇ 'ಎ' ಕ್ರಾಸ್ ನಲ್ಲಿ ರಸ್ತೆಗಳ ಕಾಮಗಾರಿಯನ್ನು ದುರಸ್ಥಿ ಪಡಿಸುವ ಬಗ್ಗೆ ತಿಳಿಸಿದರು. ಹಾಗೂ ೯ನೇ 'ಎ' ಕ್ರಾಸ್ ರಸ್ತೆಯಲ್ಲಿ ತುರ್ತಾಗಿ ಗುಂಡಿಗಳನ್ನು ಮರು ತುಂಬಲು ತಿಳಿಸಿದರು.

- ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ರಸ್ತೆಗಳಲ್ಲಿ ಅಲ್ಲಲ್ಲಿ ಗುಂಡಿಗಳ್ಳು ಬಿದ್ದಿರುವುದರಿಂದ ತಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದು ಗುಂಡಿಗಳನ್ನು ತುಂಬಲು ಸಭೆಗೆ ಹಾಜರಿದ್ದ ಸಹಾಯಕ ಅಭಿಯಂತರರಿಗೆ ತಿಳಿಸಿದರು.
- ಶ್ರೀ. ಅಂಜದ್ ಅಹ್ಮದ್, ಕೆ.ಆರ್.ಡಬ್ಲ್ಯೂ.ಎ ಸದಸ್ಯರು, ಮಾತನಾಡುತ್ತಾ ಸಾರ್ವಜನಿಕರು ರಸ್ತೆಗಳಲ್ಲಿ ವಾಹನಗಳು ಅತಿ ವೇಗವಾಗಿ ಓಡಾಡುತ್ತೀರುವುದರಿಂದ ರಸ್ತೆಗಳಲ್ಲಿ ರಸ್ತೆ ಉಬ್ಬುಗಳ ಅವಶ್ಯಕತರವಿರುವುದರಿಂದ ಟ್ರಾಫಿಕ್ ಪೋಲೀಸ್ ರವರಿಗೆ ನೋಟೀಸ್ ನೀಡಬೇಕೆಂದು ತಿಳಿಸಿದರು.

- ಶ್ರೀ. ರವಿ, ನಾಗರೀಕರು ಮಾತನಾಡುತ್ತಾ, ೫ನೇ ಕ್ರಾಸ್ ಸನ್ ರೈಸ್ ಕಾಲೋನಿ ರಸ್ತೆಯಲ್ಲಿ ಒಳಚರಂಡಿ ಹಾಳಾಗಿದ್ದು, ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡ ಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಛಾಯಾಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೇ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮದ್ಯಾಹ್ನ 12:45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ರಾಮಕೃಷ್ಣರೆಡ್ಡಿ)
ವಾರ್ಡ್ ಸಮಿತಿ ಅಧ್ಯಕ್ಷರು

NODAL OFFICER
WARD NO : 22
BBMP

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಮತ್ತು
ಸಹಾಯಕ ಅಭಿಯಂತರರು ವಾರ್ಡ್ ನಂ:22